# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಪ್ರತೀ ತಾಲ್ಲೂಕಿನಲ್ಲಿ ಒಂದು ಗ್ರಾಮ ಪಂಚಾಯಿತಿ ಗ್ರಂಥಾಲಯವನ್ನು ದೃಷ್ಟಿ ಸವಾಲಿಗೊಳಗಾದವರಿಗೆ ಬ್ರೈಲ್ ಹಾಗೂ ಶ್ರವ್ಯ ಪುಸ್ತಕಗಳ ವ್ಯವಸ್ಥೆ ಮತ್ತು ವಿಕಲಚೇತನ ಸ್ನೇಹಿಯಾಗಿಸುವುದರ ಮೂಲಕ ಬೀಕನ್ (Beacon) ಗ್ರಂಥಾಲಯವನ್ನಾಗಿ ಅಭಿವೃದ್ಧಿಪಡಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪಂರಾ/191/ಜಿ.ಪ.ಸ./2020, ಬೆಂಗಳೂರು, ದಿನಾಂಕ: 30-05-2020.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪಂರಾ 254 ಜಿಪಸ 2020 ದಿನಾಂಕ: 18-09-2020.
3. ಸರ್ಕಾರಿ ಆದೇಶ ಸಂಖ್ಯೆ:ಕಪಂರಾಲ/ಅಭಿವೃದ್ಧಿ/78/2020 ದಿನಾಂಕ: 03-11-2020.
4. ಪತ್ರ ಸಂಖ್ಯೆ: ಕಪಂರಾಅ/ಪಂ.ರಾಜ್/175/2020-21 ದಿನಾಂಕ: 08-01-2021.
5. ಮಾನ್ಯ ಮುಖ್ಯಮಂತ್ರಿಗಳ 2021-22ನೇ ಸಾಲಿನ ಆಯವ್ಯಯ ಮಂಡನೆ ದಿನಾಂಕ 08-03-2021
6. ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.ಪಿ.ಆರ್.62ಜಿ.ಪಿ.ಎಸ್. 2020, ಬೆಂಗಳೂರು. ದಿನಾಂಕ 26-05-2021.

***

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ 15ನೇ ಹಣಕಾಸಿನ ಯೋಜನೆ ಅಡಿಯಲ್ಲಿ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳಿಗೆ ಸರ್ಕಾರದಿಂದ ಅನುಮೋದಿಸಲಾದ ಮತ್ತು ಬಿಡುಗಡೆಯಾದ ಜಿಪಿಡಿಪಿಯ ಒಟ್ಟು ಅನುದಾನದಲ್ಲಿ ಶೇಕಡ 5%ರಷ್ಟು ಅನುದಾನವನ್ನು ಪ್ರತೀ ವರ್ಷ ಕಾಯ್ದಿರಿಸಿ ವಿಕಲ ಚೇತನರ ಕಲ್ಯಾಣಕ್ಕಾಗಿ ಬಳಸಲು ಸರ್ಕಾರದಿಂದ ಆದೇಶಿಸಲಾಗಿದೆ. (2)ರಲ್ಲಿ ಓದಲಾದ ಸುತ್ತೋಲೆಯ ಮೂಲಕ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗಳಿಗೆ ನಿಗಧಿಪಡಿಸಿರುವ ಹಾಗೂ ಸ್ವಂತ ಸಂಪನ್ಮೂಲಗಳಿಂದ ಬರುವ ಅನುದಾನ ಸೇರಿಸಿ (ಸಂಬಳ ಬಾಬ್ತನ್ನು ಹೊರತುಪಡಿಸಿ) ಒಟ್ಟು ಅನುದಾನದಲ್ಲಿ ಶೇಕಡ 5% ರಷ್ಟು ಅನುದಾನವನ್ನು ವಿಕಲ ಚೇತನರ ಸರ್ವತೋಮುಖ ಅಭಿವೃದ್ಧಿಗಾಗಿ ಬಳಕೆ ಮಾಡಲು ಸೂಚಿಸಿದೆ. (3)ರಲ್ಲಿ ಓದಲಾದ ಆದೇಶದ ಮೂಲಕ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಗ್ರಾಮೀಣ ಪ್ರದೇಶಗಳ ಜ್ಞಾನ ಕೇಂದ್ರಗಳಾಗಿ ಅಭಿವೃದ್ಧಿಪಡಿಸುವ ಮೂಲಕ ಗ್ರಂಥಾಲಯಗಳು ಮಕ್ಕಳ ಉಜ್ವಲ ಭವಿಷ್ಯಕ್ಕೆ ದಾರಿದೀಪವಾಗಿಸಲು "ಓದುವ ಬೆಳಕು" ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ. (4)ರಲ್ಲಿ ಓದಲಾದ ಪತ್ರದ ಮೂಲಕ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳನ್ನಾಗಿ ಉನ್ನತೀಕರಿಸಲು ತಿಳಿಸಲಾಗಿದೆ. (6)ರಲ್ಲಿ ಓದಲಾದ ಆದೇಶದ ಮೂಲಕ ಗ್ರಾಮ ಪಂಚಾಯಿತಿ ಗ್ರಂಥಾಲಯ ಹೆಸರನ್ನು "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಎಂದು ಮರು ಪದನಾಮೀಕರಿಸಿದೆ.

2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಗ್ರಾಮೀಣ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ 5622 ಗ್ರಾಮೀಣ ಗ್ರಂಥಾಲಯಗಳನ್ನು ಗ್ರಾಮೀಣ ಮಾಹಿತಿ ಮತ್ತು ಜ್ಞಾನ ಕೇಂದ್ರಗಳನ್ನಾಗಿ ಉನ್ನತೀಕರಿಸಲಾಗುವುದು. ದೃಷ್ಟಿ ಸವಾಲಿಗೊಳಗಾದ ಮಕ್ಕಳಿಗೆ ಅನುಕೂಲವಾಗುವಂತೆ ಪ್ರತಿ ತಾಲ್ಲೂಕಿಗೊಂದರಂತೆ ಬ್ರೈಲ್ ಹಾಗೂ ಶ್ರವ್ಯ ಪುಸ್ತಕಗಳನ್ನು ಒಳಗೊಂಡ ಬೀಕನ್ (Beacon) ಗ್ರಂಥಾಲಯವನ್ನು ಪ್ರಾರಂಭಿಸಲಾಗುವುದೆಂದು ಘೋಷಿಸಲಾಗಿದೆ.

ಮಾನ್ಯ ಮುಖ್ಯ ಮಂತ್ರಿಗಳು 2021-22ನೇ ಸಾಲಿನ ತಮ್ಮ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಜಾರಿಗೆ ತರಲು ಓದಲಾದ ಆದೇಶಗಳು ಮತ್ತು ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಕ್ರಮಕೈಗೊಳ್ಳುವುದರ ಜೊತೆಗೆ, ಪ್ರತೀ ತಾಲ್ಲೂಕಿನಲ್ಲಿನ ಒಂದು ಗ್ರಾಮ ಪಂಚಾಯಿತಿ

ಗ್ರಂಥಾಲಯದಲ್ಲಿ ಬ್ರೈಲ್ ಹಾಗೂ ಶ್ರವ್ಯ ಪುಸ್ತಕಗಳನ್ನು ವ್ಯವಸ್ಥೆ ಮಾಡಲು ಮತ್ತು ವಿಕಲಚೇತನ ಸ್ನೇಹಿ ಬೀಕನ್ (Beacon) ಗ್ರಂಥಾಲಯವನ್ನಾಗಿ ಅಭಿವೃದ್ಧಿಪಡಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕಪಂರಾಇ/ಅಭಿವೃದ್ಧಿ/281/2021**
**ಬೆಂಗಳೂರು, ದಿನಾಂಕ: 13.08.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಮಾನ್ಯ ಮುಖ್ಯ ಮಂತ್ರಿಗಳು 2021-22ನೇ ಸಾಲಿನ ತಮ್ಮ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಜಾರಿಗೆ ತರಲು ಪ್ರತೀ ತಾಲ್ಲೂಕಿನಲ್ಲಿನ ಒಂದು ಗ್ರಾಮ ಪಂಚಾಯಿತಿ ಗ್ರಂಥಾಲಯದಲ್ಲಿ ಬ್ರೈಲ್ ಹಾಗೂ ಶ್ರವ್ಯ ಪುಸ್ತಕಗಳನ್ನು ವ್ಯವಸ್ಥೆ ಮಾಡಲು ಮತ್ತು ವಿಕಲಚೇತನ ಸ್ನೇಹಿ ಬೀಕನ್ (Beacon) ಗ್ರಂಥಾಲಯವನ್ನಾಗಿ ಅಭಿವೃದ್ಧಿಪಡಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

- ಪ್ರತೀ ತಾಲ್ಲೂಕಿನಲ್ಲಿನ ಒಂದು ಗ್ರಾಮ ಪಂಚಾಯಿತಿ ಗ್ರಂಥಾಲಯವನ್ನು ಬೀಕನ್ (Beacon) ಗ್ರಂಥಾಲಯವನ್ನಾಗಿ ಅಭಿವೃದ್ಧಿಪಡಿಸಬೇಕು.
- ಈ ಗ್ರಂಥಾಲಯವು ವಿಕಲ ಚೇತನರ ಮುಕ್ತ ಪ್ರವೇಶಕ್ಕೆ ಸಂಪೂರ್ಣವಾದ ವ್ಯವಸ್ಥೆಗಳನ್ನು ಹೊಂದಿರಬೇಕು.
- ಇಲಾಖೆಯಿಂದ ಗ್ರಂಥಾಲಯದ ಅಭಿವೃದ್ಧಿಗೆ ಹೊರಡಿಸಲಾದ ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಎಲ್ಲಾ ಸೌಲಭ್ಯಗಳೊಂದಿಗೆ ತಾಲ್ಲೂಕಿನಲ್ಲಿ "ಮಾದರಿ ಗ್ರಾಮ ಪಂಚಾಯಿತಿ ಗ್ರಂಥಾಲಯ" ವನ್ನಾಗಿ ಅಭಿವೃದ್ಧಿಪಡಿಸಬೇಕು.
- ಬೀಕನ್ (Beacon) ಗ್ರಾಮ ಪಂಚಾಯಿತಿ ಗ್ರಂಥಾಲಯವನ್ನಾಗಿ ಅಭಿವೃದ್ಧಿಪಡಿಸಲು, ಆಯಾ ತಾಲ್ಲೂಕಿನಲ್ಲಿ ಇರುವ ಗ್ರಂಥಾಲಯಗಳ ಪೈಕಿ ಈ ಕೆಳಕಂಡ ಉತ್ತಮ ಸೌಲಭ್ಯಗಳಿರುವ ಒಂದು ಗ್ರಂಥಾಲಯವನ್ನು ಆಯ್ಕೆ ಮಾಡಿಕೊಳ್ಳುವುದು.
- ಉತ್ತಮ ಹಾಗೂ ಗ್ರಂಥಾಲಯಕ್ಕಾಗಿ ನಿರ್ಮಿಸಲಾದ ಸರ್ಕಾರದ ಕಟ್ಟಡ ಇರುವ ಗ್ರಂಥಾಲಯ (ಹೊಸ ಕಟ್ಟಡಕ್ಕೆ ಆದ್ಯತೆ),
- ಉತ್ತಮ ಸ್ಥಳಾವಕಾಶ ಮತ್ತು ಕೊಠಡಿಗಳು ಇರುವ ಕಟ್ಟಡ.(ಆವರಣ ಇದ್ದಲ್ಲಿ ಆದ್ಯತೆ),
- ವಿದ್ಯುತ್ ಸಂಪರ್ಕ ಹಾಗೂ ಉತ್ತಮ ವಿದ್ಯುದೀಕರಣ ಹೊಂದಿರುವ ಗ್ರಂಥಾಲಯ (ಯು.ಪಿ.ಎಸ್.ಇದ್ದಲ್ಲಿ ಆದ್ಯತೆ)
- ಗಣಕ ಯಂತ್ರಗಳು ಮತ್ತು ಇಂಟರ್ನೆಟ್ ಸಂಪರ್ಕ/ಸೌಲಭ್ಯವಿರುವ ಡಿಜಿಟಲೀಕರಣಗೊಳಿಸಲಾದ ಗ್ರಂಥಾಲಯ
- ಅನುಭವಿ ಮತ್ತು ಕ್ರಿಯಾತ್ಮಕ ಮೇಲ್ವಿಚಾರಕರು ಇರುವ ಗ್ರಂಥಾಲಯ,
- ಗ್ರಂಥಾಲಯದ ವ್ಯಾಪ್ತಿಯಲ್ಲಿ ದೃಷ್ಟಿ ಸವಾಲಿಗೊಳಗಾದ ಮಕ್ಕಳು ಇರುವಲ್ಲಿ ಆದ್ಯತೆ.
- ಬೀಕನ್ (Beacon) ಗ್ರಂಥಾಲಯದಲ್ಲಿ ದೃಷ್ಟಿ ಸವಾಲಿಗೊಳಗಾದ ಮಕ್ಕಳಿಗೆ ಅನುಕೂಲವಾಗುವಂತೆ ರಾಜ್ಯ ಮಟ್ಟದ ಪುಸ್ತಕ ಖರೀದಿ ಸಮಿತಿಯಿಂದ ತೀರ್ಮಾನಿಸಲಾದ ಬ್ರೈಲ್ ಹಾಗೂ ಶ್ರವ್ಯ ಪುಸ್ತಕಗಳನ್ನು ವ್ಯವಸ್ಥೆ ಮಾಡಬೇಕು.
- ಗ್ರಾಮ ಪಂಚಾಯಿತಿಗಳಿಂದ ಡಿಜಿಟಲ್ ಕಂಟೆಂಟ್ ಖರೀದಿಸಲು ಅವಕಾಶ ಇರುವುದಿಲ್ಲ.
- ವಿಕಲಚೇತನರ ಗ್ರಂಥಾಲಯ ಪ್ರವೇಶಕ್ಕಾಗಿ ಸೂಕ್ತವಾದ ರೀತಿಯಲ್ಲಿ ತಾಂತ್ರಿಕ ಮಾರ್ಗದರ್ಶಿಗಳನ್ನು ಅನುಸರಿಸಿ ರ್‍ಯಾಂಪ್ ನಿರ್ಮಿಸಬೇಕು.
- ಗ್ರಂಥಾಲಯದಲ್ಲಿ ವಿಕಲಚೇತನ ಸ್ನೇಹಿ ಶೌಚಾಲಯವನ್ನು ನಿರ್ಮಿಸಬೇಕು.
- ಈಗಾಗಲೇ ರ್‍ಯಾಂಪ್ ಮತ್ತು ಶೌಚಾಲಯ ನಿರ್ಮಿಸಿದ್ದಲ್ಲಿ, ಅವುಗಳು ಸರಿಯಾದ ತಾಂತ್ರಿಕ ಮಾರ್ಗದರ್ಶನ ಅನುಸರಿಸಿ ನಿರ್ಮಿಸಲಾಗಿದೆಯೇ? ಎಂಬುದನ್ನು ಪರಿಶೀಲಿಸಿ, ವಿಕಲ ಚೇತನರಿಗೆ ತಡೆರಹಿತ ಮುಕ್ತ ಪರಿಸರವನ್ನು ಅಭಿವೃದ್ಧಿಪಡಿಸಲು ಸೂಕ್ತವಾದ ರೀತಿಯಲ್ಲಿ ತಾಂತ್ರಿಕ ಮಾರ್ಗದರ್ಶಿಗಳನ್ನು ಅನುಸರಿಸಿ ರೆಟ್ರೋಫಿಟ್ಟಿಂಗ್ (Retrofitting) ಮಾಡಿಸಬೇಕು.

- ಗ್ರಂಥಾಲಯದ ಆವರಣದಲ್ಲಿ (ಸ್ಥಳಾವಕಾಶ ಇರುವಲ್ಲಿ) ವಿಕಲಚೇತನ ಸ್ನೇಹಿ ಆಟದ ಉಪಕರಣಗಳನ್ನು ವ್ಯವಸ್ಥೆ ಮಾಡಬೇಕು.

ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ,ಜಿಲ್ಲಾ ಪಂಚಾಯಿತಿಗಳಿಗೆ ನಿಗದಿಪಡಿಸಿರುವ ಹಾಗೂ ಸ್ವಂತ ಸಂಪನ್ಮೂಲಗಳಿಂದ ಬರುವ ಅನುದಾನ ಸೇರಿಸಿ (ಸಂಬಳ ಬಾಬ್ತನ್ನು ಹೊರತುಪಡಿಸಿ) ಆಗುವ ಒಟ್ಟು ಅನುದಾನದಲ್ಲಿ ಶೇಕಡ 5% ರಷ್ಟು ಅನುದಾನವನ್ನು 15 ನೇ ಹಣಕಾಸು ಯೋಜನೆ ಅಡಿಯಲ್ಲಿ ಬಳಕೆ ಮಾಡಿ, ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಅಭಿವೃದ್ಧಿಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಹೊರಡಿಸಲಾದ ಆದೇಶಗಳನ್ನು ಅನುಸರಿಸಿ ಎಲ್ಲಾ ಅಗತ್ಯ ಸೌಲಭ್ಯಗಳೊಂದಿಗೆ ಮಾದರಿ ಗ್ರಂಥಾಲಯವನ್ನಾಗಿ ಮಾಡುವುದರ ಮೂಲಕ ಮಾನ್ಯ ಮುಖ್ಯ ಮಂತ್ರಿಗಳು 2021-22ನೇ ಸಾಲಿನ ತಮ್ಮ ಆಯವ್ಯಯ ಬಾಷಣದಲ್ಲಿ ಘೋಷಿಸಿರುವಂತೆ ದೃಷ್ಟಿ ಸವಾಲಿಗೊಳಗಾದ ಮಕ್ಕಳಿಗೆ ಅನುಕೂಲವಾಗುವಂತೆ ಪ್ರತಿ ತಾಲ್ಲೂಕಿಗೊಂದರಂತೆ ಬ್ರೈಲ್ ಹಾಗೂ ಶ್ರವ್ಯ ಪುಸ್ತಕಗಳನ್ನು ಒಳಗೊಂಡ ಬೀಕನ್ (Beacon) ಗ್ರಂಥಾಲಯವನ್ನು ಅಭಿವೃದ್ಧಿಪಡಿಸಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಸೂಕ್ತ ಕ್ರಮಕ್ಕಾಗಿ:**

1. ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು(ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯವರ ಮುಖಾಂತರ)
4. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಮಾಹಿತಿ ಕೇಂದ್ರ/ವೆಬ್‌ಸೈಟ್ ಗ್ರಾ.ಅ.ಪ. ಇಲಾಖೆ.

**ಪ್ರತಿಯನ್ನು ಮಾಹಿತಿಗಾಗಿ**:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಇವರ ಆಪ್ತ ಸಹಾಯಕರು.
4) ನಿರ್ದೇಶಕರು(ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
5) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.